ದಿನಾಂಕ : DATE 21/5/2020
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:

# ಎಪಿಎಂಸಿ ಕಾಯ್ದೆ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ

## ಎಪಿಎಂಸಿ, ಕಾರ್ಮಿಕ ಕಾಯ್ದೆ ತಿದ್ದುಪಡಿಗೆ ವಿರೋಧ | ವಿಧಾನಸೌಧ ಆವರಣದಲ್ಲಿ ಡಿಕೆಶಿ, ಸಿದ್ದು ನೇತೃತ್ವದಲ್ಲಿ ಪ್ರತಿಭಟನೆ

## ಇದು ಸಾಂಕೇತಿಕ ಪ್ರತಿಭಟನೆಯಷ್ಟೇ | ರೈತರಿಗೆ ಸರ್ಕಾರ ನೆರವಾಗದಿದ್ದರೆ ಪ್ರತಿ ಜಿಲ್ಲೆ, ತಾಲೂಕಿನಲ್ಲಿ ಪ್ರತಿಭಟನೆ: ಡಿಕೆಶಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜ್ಯದಲ್ಲಿ ಎಪಿಎಂಸಿ ಕಾಯಿದೆ ತಿದ್ದುಪಡಿ ಮೂಲಕ ರೈತರ ಮೇಲೆ ಬಂಡವಾಳಶಾಹಿಗಳು ಹಿಡಿತ ಸಾಧಿಸುವಂತೆ ರಾಜ್ಯ ಸರ್ಕಾರ ಮಾಡಿದೆ. ಹೀಗಾಗಿ ಎಪಿಎಂಸಿ ತಿದ್ದುಪಡಿ, ಕಾರ್ಮಿಕ ಕಾನೂನು ತಿದ್ದುಪಡಿ ಸೇರಿದಂತೆ ರಾಜ್ಯದ ಜನವಿರೋಧಿ ಕ್ರಮಗಳ ವಿರುದ್ಧ ರಾಜ್ಯದ ಉದ್ದಗಲಕ್ಕೂ ಕಾಂಗ್ರೆಸ್ ಹೋರಾಟ ನಡೆಸಲಿದೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಎಚ್ಚರಿಕೆ ನೀಡಿದ್ದಾರೆ.

ಬುಧವಾರ ವಿಧಾನಸೌಧ ಆವರಣದಲ್ಲಿರುವ ಮಹಾತ್ಮ ಗಾಂಧೀಜಿ ಪ್ರತಿಮೆ ಎದುರು ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಸೇರಿದಂತೆ ಕಾಂಗ್ರೆಸ್ ಹಿರಿಯ ನಾಯಕರ ಜೊತೆ ಸೇರಿ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಧೋರಣೆ ವಿರುದ್ಧ ಪ್ರತಿಭಟನೆ ನಡೆಸಿದರು.

ಬಳಿಕ ಮಾತನಾಡಿದ ಅವರು, ಎಪಿಎಂಸಿ ಕಾಯಿದೆ ತಿದ್ದುಪಡಿ ಮೂಲಕ ಖಾಸಗಿಯವರಿಗೆ ರೈತರ ಮೇಲೆ ಹಿಡಿತ ಸಾಧಿಸಲು ಅವಕಾಶ ಮಾಡಿಕೊಟ್ಟಿದೆ. ಇದಲ್ಲದೆ ಗ್ರಾಮ ಚುನಾವಣೆ ನಡೆಸುವ ಬದಲಿಗೆ ಪಕ್ಷದ ಕಾರ್ಯಕರ್ತರನ್ನು ನೇಮಕ ಮಾಡಲು ಹುನ್ನಾರ ನಡೆಸಿದೆ. ಸರ್ಕಾರವು ಇಂತಹ ಕ್ರಮಕ್ಕೆ ಮುಂದಾಗದೆ 6 ತಿಂಗಳು ಚುನಾವಣೆ ಮುಂದೂಡಬೇಕು. ಈ ವೇಳೆ ಹಾಲಿ ಸದಸ್ಯರನ್ನೇ ಮುಂದುವರೆಸಬೇಕು ಎಂದು ಒತ್ತಾಯಿಸಿದರು.

ಬೆಂಗಳೂರಿನಲ್ಲಿ 50 ಲಕ್ಷ ಕಾರ್ಮಿಕರಿದ್ದರೆ ಕೇವಲ 3 ಲಕ್ಷ ಆಹಾರ ಕಿಟ್ ಹಂಚಿದ್ದಾರೆ. ಕೊರೋನಾ ಕಾಲದಲ್ಲಿ ಕಾರ್ಮಿಕರು, ರೈತರ ರಕ್ಷಣೆಗೆ ಬಾರದ ಸರ್ಕಾರ ಇದೀಗ ಕಾನೂನು ತಿದ್ದುಪಡಿಗಳ ಮೂಲಕ ಗದಾಪ್ರಹಾರಕ್ಕೆ ಮುಂದಾಗಿದೆ. ಕಾರ್ಮಿಕ ಕಾನೂನನ್ನು ರದ್ದು ಮಾಡುವ ಮೂಲಕ ಬೀದಿಗೆ ತಳ್ಳಲು ಯತ್ನಿಸುತ್ತಿದೆ. ಹೀಗಾಗಿ ಸಾಂಕೇತಿಕವಾಗಿ ಪ್ರತಿಭಟನೆ ನಡೆಸುತ್ತಿದ್ದು, ಮುಂದಿನ ದಿನಗಳಲ್ಲಿ ಪ್ರತಿ ಜಿಲ್ಲೆ, ತಾಲೂಕಿನಲ್ಲಿ ಪ್ರತಿಭಟಿಸುತ್ತೇವೆ ಎಂದರು.

**ಕೇಂದ್ರದ ಬೋಗಸ್ ಪ್ಯಾಕೇಜ್:** ಕೇಂದ್ರ ಹಾಗೂ ರಾಜ್ಯಕ್ಕೆ ಸರ್ಕಾರ ನಿಭಾಯಿಸುವ ಯೋಗ್ಯತೆ ಇಲ್ಲ. ... ಗ ದೇಶದಿಂದ ಬಂದವರನ್ನು ಕ್ವಾರಂಟೈನ್ ಮಾಡಿದ್ದರೆ ಇಂತಹ ಪರಿಸ್ಥಿತಿ ಉಂಟಾಗುತ್ತಿರಲಿಲ್ಲ. ಕೇಂದ್ರ ಸರ್ಕಾರ ನೀಡಿರುವ 20 ಲಕ್ಷ ಕೋಟಿ ರು. ಪ್ಯಾಕೇಜ್ ಬೋಗಸ್. ಇದರಿಂದ ಬಡವರಿಗೆ ಒಂದು ರುಪಾಯಿ ಕೂಡ ಪರಿಹಾರ ಸಿಗುವುದಿಲ್ಲ. ಬ್ಯಾಂಕ್ ಸಾಲ ಪಡೆದುಕೊಳ್ಳಿ ಎಂದು ಹೇಳಲು ಸರ್ಕಾರವೇ ಬೇಕಾಗಿಲ್ಲ. ಕೇಂದ್ರ ಬಜೆಟ್‌ನಲ್ಲಿ ಇರುವ ಯೋಜನೆಗಳನ್ನು ತಿರುಚಿ ಶಹಬ್ಬಾಸ್‌ಗಿರಿ ತೆಗೆದುಕೊಳ್ಳಲು ಯತ್ನಿಸುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ವಿಧಾನಪರಿಷತ್ ವಿರೋಧಪಕ್ಷದ ನಾಯಕ ಎಸ್.ಆರ್. ಪಾಟೀಲ್, ಕೆಪಿಸಿಸಿ ಕಾರ್ಯಾಧ್ಯಕ್ಷ ಈಶ್ವರ್ ಖಂಡ್ರ ಹಾಜರಿದ್ದರು.



ಎಪಿಎಂಸಿ ತಿದ್ದುಪಡಿ ಸೇರಿದಂತೆ ರಾಜ್ಯ ಸರ್ಕಾರದ ಹಲವು ನಿರ್ಧಾರಗಳನ್ನು ವಿರೋಧಿಸಿ ಬುಧವಾರ ವಿಧಾನಸೌಧದ ಗಾಂಧಿ ಪ್ರತಿಮೆ ಮುಂದೆ ಕಾಂಗ್ರೆಸ್ ನಾಯಕರು ಪ್ರತಿಭಟನೆ ನಡೆಸಿದರು.

### ಬೆಂಗ್ಳೂರಲ್ಲಿ ಮೊದಲ ಪ್ರತಿಭಟನೆ!

ಲಾಕ್‌ಡೌನ್ ಸಡಿಲಿಕೆ ನಂತರ ರಾಜ್ಯದಲ್ಲಿ ಮೊಟ್ಟ ಮೊದಲ ಪ್ರತಿಭಟನೆಯನ್ನು ಕೆಪಿಸಿಸಿ ಬುಧವಾರ ಬೆಂಗಳೂರಿನಲ್ಲಿ ನಡೆಸಿತು. ಎಪಿಎಂಸಿ ತಿದ್ದುಪಡಿ, ಕಾರ್ಮಿಕ ಕಾಯ್ದೆ ತಿದ್ದುಪಡಿ ಸೇರಿದಂತೆ ರಾಜ್ಯ ಸರ್ಕಾರದ ನಿರ್ಧಾರದ ವಿರುದ್ಧ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ನೇತೃತ್ವದಲ್ಲಿ ಶಾಸಕರು ಗಾಂಧಿ ಪ್ರತಿಮೆ ಎದುರು ಪ್ರತಿಭಟನೆ ನಡೆಸಿದರು.

### ಅನುಮತಿ ಇಲ್ಲದೆ ಪ್ರತಿಭಟನೆ

ಲಾಕ್‌ಡೌನ್ ಹಿನ್ನೆಲೆಯಲ್ಲಿ ರಾಜಕೀಯ ಹಾಗೂ ಧಾರ್ಮಿಕ ಕಾರಣಗಳಿಗೆ ಜನ ಸೇರಿಸುವಂತಿಲ್ಲ ಎಂಬ ನಿರ್ಬಂಧವಿದೆ. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪ್ರತಿಭಟನೆಗೆ ಪೊಲೀಸರು ಅವಕಾಶ ನೀಡಿರಲಿಲ್ಲ. ಹೀಗಿದ್ದರೂ ನಿಯಮ ಉಲ್ಲಂಘಿಸಿ ಕಾಂಗ್ರೆಸ್ ನಾಯಕರು ಪ್ರತಿಭಟನೆ ನಡೆಸಿದರು.

### ರಾಜ್ಯದ್ದು ಭ್ರಷ್ಟ ಸರ್ಕಾರ: ಸಿದ್ದರಾಮಯ್ಯ




ರಾಜ್ಯದಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದ್ದು, ರಾಜ್ಯ ಸರ್ಕಾ ಸತ್ತು ಹೋಗಿದೆ. ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅ ರಿಗೆ ವಯಸ್ಸು ಮಾತ್ರವಲ್ಲ, ಬ ವರ ಬಗ್ಗೆ ಕಾಳಜಿಯೂ ಇ ಎಂದು ವಿಧಾನಸಭೆ ವಿರೋ ಪಕ್ಷದ ನಾಯಕ ಸಿದ್ದರಾಮಯ್ಯ ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯದಲ್ಲಿ ತುಘಲಕ್ ದರ್ಬಾರ ನಡೆಯುತ್ತಿದೆ. ಯಾವ ಅನ ದಾನ ಯಾವುದಕ್ಕೆ ಬಳಕೆಯಾ ಗುತ್ತಿದೆ ಎಂಬುದು ಗೊತ್ತಿಲ್ಲ ತೀವ್ರ ಭ್ರಷ್ಟಾಚಾರ ನಡೆಯು ತ್ತಿದೆ. ಮುಖ್ಯಮಂತ್ರಿಗಳಿ ಬಡವರು, ಕಾರ್ಮಿಕರು ಮಹಿಳೆಯರ ಬಗ್ಗೆ ಕಾಳಜಿ ಇಲ್ಲ ಪ್ಯಾಕೇಜ್‌ನ ಒಂದು ನಯಾಪೈ ಹಣವೂ ಫಲಾನುಭವಿಗಳಿ ತಲುಪಿಲ್ಲ ಎಂದು ಟೀಕಿಸಿದರು.